# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 03-12-2022 ರಂದು ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ದಿನಾಂಕ: 03-12-2022 ರಂದು ಬೆಳಗ್ಗೆ 11.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-02ರ ವಾರ್ಡ್ ಸಮಿತಿಯ ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನೆಡೆದ ವಾರ್ಡ್ ಕಮಟ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ಕೆ.ಜಿ.ಸುಂದರೇಶ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) |
| 02 | ಶ್ರೀ.ನರಸಿಂಹಯ್ಯ | ಕಾರ್ಯದರ್ಶಿಗಳು ಮತ್ತು ಸಹಾಯಕ ಅಭಿಯಂತರರು (ವಾರ್ಡ್ ನಂ-02) |
| 03 | ಡಾ|| ಮಂಜುಳ ಎಸ್ | ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯ (ಗೈರು ಹಾಜರಿ) |
| 04 | ಶ್ರೀ.ಕೆ.ಎನ್. ಬಾಬುರೆಡ್ಡಿ | ಸಹಾಯಕ ಅಭಿಯಂತರರು (ವಿದ್ಯುತ್) (ಗೈರು ಹಾಜರಿ) |
| 05 | ಶ್ರೀ.ಅಶೋಕ್ .ಎಂ.ಆರ್ | ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ(ಗೈರು ಹಾಜರಿ) |
| 06 | ಶ್ರೀ. ಎನ್. ಶ್ರೀರಾಮ ರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ |
| 07 | ಶ್ರೀ. ವಿನಯ ಕುಮಾರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 08 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 09 | ಶ್ರೀ.ಕುಮಾರ್ ಸ್ವಾಮಿ | ಜಾನುವಾರ ಅಧಿಕಾರಿಗಳು |
| 10 | ಶ್ರೀಮತಿ. ನಂದಶ್ರೀ. | ಕಿರಿಯ ಆರೋಗ್ಯ ಪರಿವೀಕ್ಷಕರು |
| 11 | ಶ್ರೀ.ರಾಮಲಿಂಗ | ಜಲ ಪರೀವಿಕ್ಷಕರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 12 | ಶ್ರೀ.ವಿನಯಕುಮಾರ್ | (ಸ.ಅ) ವಿದ್ಯುತ್ |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು/ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು |
| 02 | ಶ್ರೀ. ಅ.ಬ ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |

| | | |
|---|---|---|
| 04 | ಶ್ರೀ.ಎ.ಎಸ್.ರಾಜು | ಸ್ಥಳೀಯ ನಿವಾಸಿಗಳು |
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು |
| 06 | ಶ್ರೀ.ವೆಂಕಟೇಶ್ | ಮಾರುತಿನಗರ |
| 07 | ಹರಿನಾಥ | ಸಾರ್ವಜನಿಕರು |
| 08 | ಶಂಕರ್ ನಾಯಕ್ | ನಾಗರ್ಜುನ ಅಪಾರ್ಟ್‌ಮೆಂಟ್ (ಅಧ್ಯಕ್ಷರು) |
| 09 | ವೇಣುಗೋಪಾಲ | ಕೊಂಡಪ್ಪ ಬಡಾವಣೆ |

ಶ್ರೀ.ನರಸಿಂಹಯ್ಯ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು ವಾರ್ಡ್ ನಂ-02 ರವರು ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರ ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೋಡೆಲ್ ಅಧಿಕಾರಿರವರನ್ನು ಕೋರಲಾಯಿತು.

ಅದರಂತೆ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ: 23-11-2022 ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಿದರು. ಹಾಗೂ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಹಾಗೂ ಈ ಹಿಂದೆ ಕೈಗೊಂಡಿರುವ ಸಭೆಯ ನಡವಳಿಗಳನ್ನು ಸಭೆಯಲ್ಲಿ ವರದಿಯನ್ನು ಓದಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಚೌಡೇಶ್ವರಿ ವಾರ್ಡ್ ನಂ -02ರ ವ್ಯಾಪ್ತಿಯಲ್ಲಿರುವ ಯಲಹಂಕ ಕೆರೆಯ ಪಕ್ಕದಲ್ಲಿರುವ ರಾಜಕಾಲುವೆಯಲ್ಲಿ ಹೂಳು ತುಂಬಿದ್ದು ಇದನ್ನು ತೆರವುಗೊಳಿಸುವಂತೆ ಹಲವಾರು ಬಾರಿ ದೂರನ್ನು ಸಲ್ಲಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಎಂಬುದಾಗಿ ಸ್ಥಳೀಯ ನಿವಾಸಿಗಳು ಸಭೆಯಲ್ಲಿ ಅಕ್ಷೇಪಣೆ ಮಾಡಿದರು. | ಇದಕ್ಕೆ ಸಂಬಂದಿಸಿದಂತೆ ನೋಡೆಲ್ ಅಧಿಕಾರಿಗಳು ಮಾತನಾಡಿ ಬೃಹತ್ ನೀರುಗಾಲುವೆ ವಿಭಾಗದ ಅಧಿಕಾರಿಗಳಿಗೆ ಈಗಾಗಲೇ ವಿಷಯ ರವಾನಿಸಲಾಗಿರುತ್ತದೆ. ಹಾಗೂ ಮತ್ತೊಮ್ಮೆ ಪತ್ರದ ಮುಖೇನ ವಿಷಯ ತಿಳಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಲಾಗುವುದೆಂದು ಸಭೆಯಲ್ಲಿ ಉತ್ತರಿಸಿದರು. | ಕಾರ್ಯಪಾಲಕ ಅಭಿಯಂತರರು ಬೃಹತ್ ನೀರುಗಾಲುವೆ ವಿಭಾಗ ಬಿ.ಬಿ.ಎಂ.ಪಿ (ಇವರಿಗೆ ತಿಳಿಸಲಾಗಿದೆ) |
| 02 | ಚೌಡೇಶ್ವರಿ ವಾರ್ಡ್ ನಂ -02ರ ವ್ಯಾಪ್ತಿಯಲ್ಲಿರುವ ಕಾಮಾಕ್ಷಮ್ಮ ಬಡಾವಣೆಯಲ್ಲಿ ಕಾವೇರಿ ನೀರು ಬರುತ್ತಿಲ್ಲವೆಂದು ಸ್ಥಳೀಯ ನಿವಾಸಿಗಳಾದ ಈಶ್ವರಪ್ಪ ರವರು ಸಭೆಯಲ್ಲಿ ಅಕ್ಷೇಪಣೆ ವ್ಯಕ್ತಪಡಿಸಿದರು | ಇದಕ್ಕೆ ಸಂಬಂದಿಸಿದಂತೆ ನೋಡೆಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ವಿನಯ ಕುಮಾರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಲು ಸೂಚಿಸಿದರು | ಶ್ರೀ.ವಿನಯ ಕುಮಾರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು |
| 03 | ಕೊಂಡಪ್ಪ ಬಡಾವಣೆಯಲ್ಲಿ ಬ್ಲಾಕ್ ಸ್ಪಾರ್ಟ್ ಗಳಲ್ಲಿ ಕಸ ತೆಗೆಯುವಂತೆ ಸ್ಥಳೀಯರು ಸಭೆಯಲ್ಲಿ ಕೋರಿದರು | ನೋಡೆಲ್ ಅಧಿಕಾರಿಗಳು ಮಾತನಾಡಿ ಸ್ಥಳ ಪರಿಶೀಲನೆ ಮಾಡಿ ಬ್ಲಾಕ್ ಸ್ಪಾರ್ಟ್‌ಗಳಲ್ಲಿರುವ ಕಸ ತೆಗೆಯುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು. | ಕಿರಿಯ ಆರೋಗ್ಯ ಪರಿವೀಕ್ಷಕರು |

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ.ನರಸಿಂಹಯ್ಯ
ಸಹಾಯಕ ಅಭಿಯಂತರರು

ಶ್ರೀ.ಕೆ.ಜಿ.ಸುಂದರೇಶ್
ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ-02.

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ಯಲಹಂಕ ವಿಭಾಗ/ವಿದ್ಯುತ್/ರಸ್ತೆ ಮತ್ತು ಮೂಲಭೂತ ಸೌಕಾರ್ಯ/ಯೋಜನೆ/ಕೆರೆಗಳು/ ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ/ ವಿದ್ಯುತ್/ ಬೇಸ್ಕಾಂ/ ಬಿಡಬ್ಲ್ಯೂ.ಎಸ್.ಎಸ್.ಬಿ/ಬೊರೆವೆಲ್ ಡಿವಿಷನ್/ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ/ಜಾಹಿರಾತು ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
7. ಆರಕ್ಷಕ ನೀರಿಕ್ಷಕರು ಯಲಹಂಕ ಪೊಲೀಸ್ ಠಾಣೆ ಸಂಚಾರಿ/ ಕಾನೂನು ಸುವ್ಯವಸ್ಥೆ/ ಯಲಹಂಕ ಬೆಂಗಳೂರು ರವರ ಸೂಕ್ತ ಕ್ರಮಕ್ಕಾಗಿ.
8. ಜಾನುವಾರಿ ಅಧಿಕಾರಿಗಳು ಪಶುಪಾಲನೆ ವಿಭಾಗ ಯಲಹಂಕ ವಲಯ ರವರ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕರು ತೋಟಗಾರಿಕೆ ಇಲಾಖೆ ಬಿ.ಬಿ.ಎಂ.ಪಿ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
10. ಡಿಪೋ ಮ್ಯಾನೇಜರ್ ಡಿಪೊ -13 ಪುಟ್ಟೇನಹಳ್ಳಿ ಡಿಪೋ ಯಲಹಂಕ ಬೆಂಗಳೂರು ಸೂಕ್ತ ಕ್ರಮಕ್ಕಾಗಿ.
11. ಕಛೇರಿ ಕಡತಕ್ಕೆ.